146ನೇ(6ನೇ)ಅಧಿವೇಶನ
ನಿ-330
ಕ್ರ-04
ಕಂಪ್ಯೂಟರ್

# ಕರ್ನಾಟಕ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಮರಿತಿಬ್ಬೇಗೌಡ ಇವರು ನಿಯಮ 330 ರಡಿಯಲ್ಲಿ ಗಮನ ಸೆಳೆಯುವ ಸೂಚನೆ

## ವಿಷಯ

ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ದೀರ್ಘಕಾಲದಿಂದ ಸುಮಾರು 14,000 ಮಂದಿ ಅತಿಥಿ ಉಪನ್ಯಾಸಕರಾಗಿ ಕಾರ್ಯನಿರ್ವಹಿಸುತ್ತಿದ್ದಾರೆ. ಇತ್ತೀಚೆಗೆ ಇವರ ಬೋಧನಾ ಅವಧಿಯನ್ನು ಹೆಚ್ಚು ಮಾಡಿ, ವೇತನ ಪರಿಷ್ಕರಣೆ ಮಾಡಿರುವುದರಿಂದ ಸುಮಾರು 9,000 ಮಂದಿ ಅತಿಥಿ ಉಪನ್ಯಾಸಕರು ಉದ್ಯೋಗ ಕಳೆದುಕೊಳ್ಳುವ ಸಂಭವವಿದ್ದು, ಇದರಿಂದ ಉಂಟಾಗಿರುವ ಗಂಭೀರ ಸಮಸ್ಯೆ ಕುರಿತು ಮಾನ್ಯ ಉನ್ನತ ಶಿಕ್ಷಣ, ಐ.ಟಿ ಅಂಡ್ ಬಿ.ಟಿ. ವಿಜ್ಞಾನ ಮತ್ತು ತಂತ್ರಜ್ಞಾನ ಮತ್ತು ಕೌಶಲ್ಯಾಭಿವೃದ್ಧಿ ಸಚಿವರ ಗಮನ ಸೆಳೆಯಬಯಸುತ್ತೇನೆ.

## ಉತ್ತರ

ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ರಲ್ಲಿ ಮತ್ತು ತಿದ್ದುಪಡಿ ಆದೇಶ ದಿನಾಂಕ:24.01.2022ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಕಲಾ, ವಾಣಿಜ್ಯ ವಿಭಾಗಕ್ಕೆ ಗರಿಷ್ಠ 8 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 10 ಗಂಟೆಗಳ ಕಾರ್ಯಭಾರಕ್ಕೆ ಬದಲಾಗಿ, ಕಲಾ, ವಾಣಿಜ್ಯ ವಿಭಾಗಕ್ಕೆ ಗರಿಷ್ಠ 15 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 19 ಗಂಟೆಗಳ ಕಾರ್ಯಭಾರವನ್ನು ನೀಡಿ, ಗೌರವಧನವನ್ನು ಹೆಚ್ಚಿಸಲಾಗಿದ್ದು, ಅತಿಥಿ ಉಪನ್ಯಾಸಕರಾಗಿ ಹೆಚ್ಚಿನ ಅವಧಿಗೆ ಸೇವೆ ಸಲ್ಲಿಸಿದವರಿಗೆ ಅತಿಥಿ ಉಪನ್ಯಾಸಕರ ನೇಮಕಾತಿಯಲ್ಲಿ ಪ್ರಾಧ್ಯಾನ್ಯತೆ ಕೊಡುವುದರೊಂದಿಗೆ ಪ್ರಸ್ತುತ ಅನುಸರಿಸುತ್ತಿರುವ ಮಾನದಂಡಗಳನ್ವಯ ಆಯ್ಕೆ ಪಟ್ಟಿಯನ್ನು ತಯಾರಿಸುವಂತೆ ಆದೇಶಿಸಲಾಗಿದೆ.

ಅದರಂತೆ, ಕಾಲೇಜು ಶಿಕ್ಷಣ ಇಲಾಖೆ ಅಡಿಯಲ್ಲಿ ಬರುವ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ವಿವಿಧ ವಿಷಯಗಳಲ್ಲಿ ಖಾಯಂ ಉಪನ್ಯಾಸಕರಿಗೆ ಕಾರ್ಯಭಾರವನ್ನು ಹಂಚಿಕೆಮಾಡಿ, ಉಳಿದ ಕಾರ್ಯಭಾರವನ್ನು ಕಲಾ, ವಾಣಿಜ್ಯ ವಿಭಾಗಕ್ಕೆ ಗರಿಷ್ಠ 15 ಮತ್ತು ವಿಜ್ಞಾನ ವಿಭಾಗಕ್ಕೆ ಗರಿಷ್ಠ 19 ಗಂಟೆಗಳ ಕಾರ್ಯಭಾರದ ಆಧಾರದ ಮೇಲೆ ಲಭ್ಯವಾಗಿರುವ ಕಾರ್ಯಭಾರಕ್ಕೆ ಅಗತ್ಯವಿರುವ 10664 ಅತಿಥಿ ಉಪನ್ಯಾಸಕರನ್ನು ಯು.ಜಿ.ಸಿ. ವಿದ್ಯಾರ್ಹತೆ ಹಾಗೂ ಈ ಹಿಂದೆ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರಾಗಿ ಸೇವಾ ಅನುಭವವನ್ನು ಪರಿಗಣಿಸಿ ನೇಮಿಸಿಕೊಳ್ಳಲು ಕ್ರಮವಹಿಸಲಾಗಿದೆ. ಈ ಪೈಕಿ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಸ್ಥಳ/ಕಾಲೇಜು ಆಯ್ಕೆ ಮಾಡಿಕೊಂಡಿರುವ 7080 ಅತಿಥಿ ಉಪನ್ಯಾಸಕರು ಪ್ರಸ್ತುತ ಸಂಬಂಧಪಟ್ಟ ಕಾಲೇಜುಗಳಲ್ಲಿ ಈಗಾಗಲೇ ಕರ್ತವ್ಯಕ್ಕೆ ಹಾಜರಾಗಿರುತ್ತಾರೆ.

ಬಾಕಿ ಲಭ್ಯವಿರುವ / ಉಳಿಕೆಯಾಗಿರುವ ಕಾರ್ಯಭಾರಕ್ಕೆ ಇನ್ನೂ ಸುಮಾರು 3164 ಅತಿಥಿ ಉಪನ್ಯಾಸಕರು ಅಗತ್ಯವಿದ್ದು, ಅವರನ್ನು 2ನೇ ಸುತ್ತಿನ ಆನ್‌ಲೈನ್ ಕೌನ್ಸಿಲಿಂಗ್ ಮೂಲಕ ಆಯ್ಕೆ ಮಾಡಿಕೊಳ್ಳಲು ಕ್ರಮಕೈಗೊಳ್ಳಲಾಗುತ್ತಿದೆ. ಈ ಹಿಂದೆ ಸುಮಾರು 14,000 ಅತಿಥಿ ಉಪನ್ಯಾಸಕರು ಕಾರ್ಯ ನಿರ್ವಹಿಸಿರುತ್ತಾರೆ. ಇದರಲ್ಲಿ ಒಟ್ಟು 10664 ಅತಿಥಿ ಉಪನ್ಯಾಸಕರನ್ನು ಗರಿಷ್ಠ 15/19 ಗಂಟೆಗಳ ಕಾರ್ಯಭಾರಕ್ಕೆ ನೇಮಿಸಿಕೊಳ್ಳಲಾಗುತ್ತಿರುವುದರಿಂದ, ಅತಿಥಿ ಉಪನ್ಯಾಸಕರಾಗಿ ಕಡಿಮೆ ಅವಧಿಯ ಸೇವಾ ಅನುಭವ ಹೊಂದಿರುವ ಹಾಗೂ ಆಯ್ಕೆಪಟ್ಟಿಯಲ್ಲಿ ಕಡಿಮೆ ಅಂಕ ಪಡೆದಿರುವ ಸುಮಾರು 3,336 ಅತಿಥಿ ಉಪನ್ಯಾಸಕರಿಗೆ ಕಾರ್ಯಭಾರ ಲಭ್ಯವಿರುವುದಿಲ್ಲ.

**ಇಡಿ 44 ಡಿಸಿಇ 2022**

**(ಡಾ. ಅಶ್ವಥ್ ನಾರಾಯಣ ಸಿ.ಎನ್.)**
**ಉನ್ನತ ಶಿಕ್ಷಣ, ಐ.ಟಿ.-ಬಿ.ಟಿ.ವಿಜ್ಞಾನ ಮತ್ತು ತಂತ್ರಜ್ಞಾನ, ವಿದ್ಯುನ್ಮಾನ ಹಾಗೂ ಕೌಶಲ್ಯಾಭಿವೃದ್ಧಿ, ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು**